# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 86

ಸದಸ್ಯರ ಹೆಸರು : ಶ್ರೀ ಕೋಟ ಶ್ರೀನಿವಾಸ ಪೂಜಾರಿ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 05-07-2023

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕರಾವಳಿಯ ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ ನೂರಾರು ಗ್ರಾಮಗಳಲ್ಲಿ ಯಾವುದೇ ಸರ್ಕಾರಿ ಬಸ್ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಸರ್ಕಾರದ ಗಮನಕ್ಕೆ ಬಂದಿದೆ</td></tr>
<tr><td>ಆ</td><td>ಸರ್ಕಾರಿ ಬಸ್ ಸೌಲಭ್ಯಗಳಿಲ್ಲದ ಪ್ರದೇಶದ ಗ್ರಾಮೀಣ ಮಹಿಳೆಯರು ಸರ್ಕಾರದ ಶಕ್ತಿ ಯೋಜನೆಯಡಿಯಲ್ಲಿ ಸೌಲಭ್ಯ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಸರ್ಕಾರದ ಗಮನಕ್ಕೆ ಬಂದಿದೆ</td></tr>
<tr><td>ಇ</td><td>ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯೂ ಸೇರಿದಂತೆ ಸರ್ಕಾರಿ ಬಸ್ ಸೌಲಭ್ಯವಿಲ್ಲದ ಪ್ರದೇಶಗಳ ವ್ಯಾಪ್ತಿಯಲ್ಲಿ ಖಾಸಗಿ ಬಸ್‌ಗಳಲ್ಲಿಯೂ ಸರ್ಕಾರದ ಶಕ್ತಿ ಯೋಜನೆಯನ್ನು ಅನುಷ್ಠಾನ ಮಾಡುವ ಕುರಿತು ಸರ್ಕಾರದ ನಿಲುವೇನು;</td><td>ಅಂತಹ ಪ್ರಸ್ತಾವನೆ ಇರುವುದಿಲ್ಲ</td></tr>
<tr><td>ಈ</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ಮತ್ತು ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆಗಳ ಕಳೆದ 5 ವರ್ಷಗಳ ಆದಾಯದ ಲಾಭ ನಷ್ಟಗಳೇನು? (ವರ್ಷವಾರು, ಸಂಸ್ಥೆವಾರು ವಿವರ ಒದಗಿಸುವುದು)</td><td>ಸಾರಿಗೆ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಕಳೆದ 10 ವರ್ಷಗಳ ಲಾಭ/ನಷ್ಟದ ವಿವರವು ಈ ಕೆಳಕಂಡಂತಿದೆ:<br>(ರೂ.ಕೋಟಿಗಳಲ್ಲಿ)
<table>
<tr><th>ವರ್ಷ</th><th>ನಷ್ಟ</th></tr>
<tr><td colspan="2">ಕ.ರಾ.ರ.ಸಾ.ನಿಗಮ</td></tr>
<tr><td>2013-14</td><td>75.56</td></tr>
<tr><td>2014-15</td><td>43.49</td></tr>
<tr><td colspan="2">2015-16ನೇ ಸಾಲಿನಲ್ಲಿ ನಿಗಮಕ್ಕೆ ರೂ.50.95 ಟಿಗಳಷ್ಟು ಲಾಭವಾಗಿರುತ್ತದೆ.</td></tr>
</table>
</td></tr>
</table>

| | |
|---|---|
| 2016-17 | 177.08 |
| 2017-18ನೇ ಸಾಲಿನಲ್ಲಿ ನಿಗಮಕ್ಕೆ **ರೂ.4.50 ಕೋಟಿಗಳಷ್ಟು** ಲಾಭವಾಗಿರುತ್ತದೆ. | |
| 2018-19 | 134.93 |
| 2019-20 | 157.56 |
| 2020-21 | 581.15 |
| 2021-22 | 423.31 |
| 2022-23 (ಅಂದಾಜು) | 111.25 |
| **ಬೆಂ.ಮ.ಸಾ.ಸಂಸ್ಥೆ** | |
| 2013-14 | 147.59 |
| 2014-15 | 64.90 |
| 2015-16ನೇ ಸಾಲಿನಲ್ಲಿ ಸಂಸ್ಥೆಗೆ **ರೂ.13.73ಕೋಟಿಗಳಷ್ಟು** ಲಾಭವಾಗಿರುತ್ತದೆ. | |
| 2016-17 | 260.91 |
| 2017-18 | 217.61 |
| 2018-19 | 349.49 |
| 2019-20 | 549.34 |
| 2020-21 | 164.20 |
| 2021-22 | 178.25 |
| 2022-23 (ಅಂದಾಜು) | 77.38 |
| **ವಾ.ಕ.ರ.ಸಾ.ಸಂಸ್ಥೆ** | |
| 2013-14 | 66.78 |
| 2014-15 | 53.08 |
| 2015-16 | 38.78 |
| 2016-17 | 119.56 |
| 2017-18 | 71.98 |
| 2018-19 | 89.07 |
| 2019-20 | 186.45 |
| 2020-21 | 389.08 |
| 2021-22 | 462.58 |
| 2022-23 (ಅಂದಾಜು) | 10.25 |
| **ಕ.ಕ.ರ.ಸಾ.ನಿಗಮ** | |
| 2013-14 | 20.93 |
| 2014-15 | 39.72 |
| 2015-16 | 15.12 |
| 2016-17 | 54.46 |
| 2017-18 | 33.31 |
| 2018-19 | 68.23 |
| 2019-20 | 89.27 |
| 2020-21 | 186.45 |

| | | |
|---|---|---|
| | | ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.<br>**ವಾ.ಕ.ರ.ಸಾ.ಸಂಸ್ಥೆ:**<br>ಪ್ರಸ್ತುತ ಸಂಸ್ಥೆಯಲ್ಲಿ ಚಾಲನಾ ಸಿಬ್ಬಂದಿಗಳ ತೀವ್ರ ಕೊರತೆ ಇರುವ ಹಿನ್ನೆಲೆಯಲ್ಲಿ ಚಾಲನಾ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳುವ ಕುರಿತಾದ ಸಂಸ್ಥೆಯ ದಿನಾಂಕ: 30.06.2023ರ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.<br>**ಕ.ಕ.ರ.ಸಾ.ನಿಗಮ:**<br>925-ಚಾಲಕ, 694-ಚಾಲಕ-ಕಂ-ನಿರ್ವಾಹಕ, 16-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳಲು ಹಾಗೂ ಬಾಕಿ 36 ಹಿಂಬಾಕಿ ಹುದ್ದೆಗಳ ನೇಮಕಾತಿಗೂ ಅನುಮತಿ ನೀಡಲಾಗಿದ್ದು, ಜಾಹೀರಾತು ಹೊರಡಿಸಲಾಗಿದೆ.<br>1619 ಚಾಲನಾ ಸಿಬ್ಬಂದಿಗಳ ನೇಮಕಾತಿಗಾಗಿ ಒಟ್ಟು 21598 ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನಾ ಕಾರ್ಯ ಪೂರ್ಣಗೊಳಿಸಿದ್ದು, ಅವರುಗಳಲ್ಲಿ ಚಾಲನಾ ಪರೀಕ್ಷೆಗೆ ಅರ್ಹರಾಗಿರುವ 17661 ಅಭ್ಯರ್ಥಿಗಳಿಗೆ ಗಣಕೀಕೃತ ಚಾಲನಾ ಪರೀಕ್ಷೆಯನ್ನು ಕೈಗೊಳ್ಳಲು ಚಾಲನಾ ಪಥ ಕಾರ್ಯ ಪೂರ್ಣಗೊಂಡಿದ್ದು, ದಿನಾಂಕ: 03.07.2023ರಿಂದ ಚಾಲನಾ ವೃತ್ತಿ ಪರೀಕ್ಷೆಗಳ ಆರಂಭಿಸಲಾಗುತ್ತಿದೆ.<br>35 ಹಿಂಬಾಕಿ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ.<br>51 ಗಣಕ ಸಹಾಯಕ ಹಾಗೂ 8 ಅಂಕಿ ಅಂಶ ಸಹಾಯಕ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಲು ಪ್ರಕ್ರಿಯೆ ಪ್ರಗತಿಯಲ್ಲಿದೆ.<br>ನಿಗಮದ ವಯೋನಿವೃತ್ತಿ ಹೊಂದಿದ ಚಾಲನಾ ಸಿಬ್ಬಂದಿಗಳ ಸೇವೆಯನ್ನು (ಚಾಲಕ ಮತ್ತು ನಿರ್ವಾಹಕ) ತಾತ್ಕಾಲಿಕವಾಗಿ ಬಳಸಲಾಗುತ್ತಿದ್ದು, ಪ್ರಸ್ತುತ 118 ನಿವೃತ್ತಿ ಚಾಲನಾ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳಲಾಗಿದೆ. |

ಸಂಖ್ಯೆ: ಟಿಡಿ 75 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು

ನೇಮಕಾತಿಯ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

ಕಾಲಕಾಲಕ್ಕೆ ಖಾಲಿಯಾಗಿರುವ/ ಖಾಲಿಯಾಗುವ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ನೇರ ನೇಮಕಾತಿಯಡಿ ಖಾಲಿ ಇರುವ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರಭರ್ತಿ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆಹಾಗೂ ಅನುಕಂಪದಆಧಾರದಮೇಲೆ ಪ್ರಥಮ ದರ್ಜೆಸಹಾಯಕರ, ದ್ವಿತೀಯ ದರ್ಜೆ ಸಹಾಯಕರ ಮತ್ತು ಗ್ರೂಪ್-ಡಿ ನೌಕರರ ವೃಂದಕ್ಕೆ ನೇರ ನೇಮಕಾತಿಯಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ನೇಮಕಾತಿಯನ್ನು ನೀಡಲಾಗುತ್ತಿದೆ. ಅಲ್ಲದೆ, ಬಡ್ತಿಗೆ ಮೀಸಲಿರಿಸಿರುವ ಹುದ್ದೆಗಳ ಪೈಕಿ ಖಾಲಿ ಇರುವ ಹುದ್ದೆಗಳನ್ನು ಕಾಲಕಾಲಕ್ಕೆ ಸಂಬಂಧಪಟ್ಟ ವೃಂದಗಳಿಂದ ಅರ್ಹ ಅಧಿಕಾರಿ/ ನೌಕರರುಗಳಿಗೆ ಮುಂಬಡ್ತಿ ನೀಡುವ ಮೂಲಕ ಭರ್ತಿ ಮಾಡಲಾಗುತ್ತಿದೆ.

**ಕ.ರಾ.ರ.ಸಾ.ನಿಗಮ:**

ನಿಗಮದಲ್ಲಿ ಮೇ-2023ರ ಅಂತ್ಯಕ್ಕೆ ಒಟ್ಟು 6574 ಅಧಿಕಾರಿ/ಸಿಬ್ಬಂದಿಗಳ ಕೊರತೆಯಿದ್ದು, ಖಾಲಿ ಇರುವ ಹುದ್ದೆಗಳ ಪೈಕಿ ಬಡ್ತಿ ಮೀಸಲಾದ ಹುದ್ದೆಗಳನ್ನು ಕಾಲಕಾಲಕ್ಕೆ ಬಡ್ತಿ ಮೂಲಕ ತುಂಬಲಾಗುತ್ತಿದೆ.

3745 ಚಾಲನಾ ಸಿಬ್ಬಂದಿ, 726 ತಾಂತ್ರಿಕ ಸಹಾಯಕ ಮತ್ತು 200 ಕರಾಸಾ ಪೇದೆ (ಭದ್ರತಾ ರಕ್ಷಕ) ಹುದ್ದೆಗಳಿಗೆ ಚಾಲನೆ ನೀಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

**ಬೆಂ.ಮ.ಸಾ.ಸಂಸ್ಥೆ:**

ಸಂಸ್ಥೆಯಲ್ಲಿ ಮೇ-2023ರ ಅಂತ್ಯಕ್ಕೆ 4695 ಸಿಬ್ಬಂದಿಗಳ ಕೊರತೆ ಇರುತ್ತದೆ. ಸಂಸ್ಥೆಯಲ್ಲಿ ಮಂಜೂರಾತಿ ಇರುವ ಹುದ್ದೆಗಳ ಪೈಕಿ ಗ್ರೂಪ್-ಎ, ಬಿ ಮತ್ತು ಸಿ (ಸಿ-ವೃಂದದ ಮೇಲ್ವಿಚಾರಕ) ವೃಂದಗಳ ವೃಂದ ನಿಯಂತ್ರಣಾ ಪ್ರಾಧಿಕಾರವು ಕ.ರಾ.ರ.ಸಾ.ನಿಗಮ ಆಗಿರುವುದರಿಂದ ಸದರಿ ಹುದ್ದೆಗಳನ್ನು ಕ.ರಾ.ರ.ಸಾ.ನಿಗಮದಿಂದ ಕಾಲಕಾಲಕ್ಕೆ ಭರ್ತಿ ಮಾಡಲಾಗುತ್ತದೆ.

ಗ್ರೂಪ್-ಸಿ (ಮೇಲ್ವಿಚಾರಕೇತರ) ಮತ್ತು ಗ್ರೂಪ್-ಡಿ ಹುದ್ದೆಗಳನ್ನು ಮಾತ್ರ ಬೆಂ.ಮ.ಸಾ.ಸಂಸ್ಥೆಯಲ್ಲಿ ನಿಯಮಾನುಸಾರ ಭರ್ತಿಗೊಳಿಸಬೇಕಾಗಿದ್ದು, ಪ್ರಸ್ತುತ ಸಂಸ್ಥೆಯಲ್ಲಿ 2023-24ನೇ ಸಾಲಿನ ಕಾರ್ಯಯೋಜನೆಯನ್ವಯ ಅಗತ್ಯಕ್ಕೆ ತಕ್ಕಂತೆ ಅನುಸೂಚಿಗಳ ಆಚರಣೆಗೆ ಕೊರತೆ ಉಂಟಾಗಲಿರುವ ಚಾಲನಾ ಸಿಬ್ಬಂದಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿಗೊಳಿಸುವ

| | | |
|---|---|---|
| | | ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ.<br><br>ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ 76 ಮೋಟಾರು ವಾಹನ ನಿರೀಕ್ಷಕರ ಹುದ್ದೆಗಳನ್ನು (70 ಉಳಿಕೆ ಮೂಲ ವೃಂದದ + 6 ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು) ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿಸಿದ್ದು, ನೇಮಕಾತಿಯಿಂದ ವಿಶಿಷ್ಟ ಚೇತನ ಅಭ್ಯರ್ಥಿಗಳನ್ನು ಕೈಬಿಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯನ್ನು ಕೋರಲಾಗಿದ್ದು, ಸೂಕ್ತ ಆದೇಶವನ್ನು ನಿರೀಕ್ಷಿಸಲಾಗುತ್ತಿದೆ.<br><br>ದ್ವಿತೀಯ ದರ್ಜೆ ಸಹಾಯಕರ 24 ಉಳಿಕೆ ಮೂಲ ವೃಂದದ ಹಾಗೂ 5 ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿಸಿದ್ದು, ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಪ್ರಾ.ಸಾ.ಅ., ಮೋ.ವಾ.ನಿ. ಮತ್ತು ದ್ವಿ.ದ.ಸ ಹುದ್ದೆಗಳ ನೇಮಕಾತಿಯ ಕುರಿತಂತೆ, ಸರ್ಕಾರದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ: 27-03-2023 ರಲ್ಲಿ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯವನ್ನು ಕಲ್ಪಿಸುವ ದೃಷ್ಟಿಯಿಂದ ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ಪುನರ್ ವರ್ಗೀಕರಿಸಿ, ಮೀಸಲಾತಿ ಪ್ರಮಾಣವನ್ನು ಯಥಾವತ್ತಾಗಿ ಮುಂದುವರೆಸಿ ಆದೇಶಿಸಲಾಗಿದೆ ಹಾಗೂ ಸದರಿ ಆದೇಶದಂತೆ ವರ್ಗೀಕರಣಕ್ಕೆ ರೋಸ್ಟರ್ ಬಿಂದುವನ್ನೂ ಸಹ ನಿಗದಿಪಡಿಸಿರುವುದಿಲ್ಲ. ಆದ್ದರಿಂದ ಸದರಿ ರೋಸ್ಟರ್ ಬಿಂದುಗಳನ್ನು ನಿಗದಿಪಡಿಸಿದ ನಂತರ ಮರುಪರಿಶೀಲಿಸಿ ನೇರನೇಮಕಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.<br><br>ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ 150 ಮೋಟಾರು ವಾಹನ ನಿರೀಕ್ಷಕರ ನೇರ ನೇಮಕಾತಿ ಹುದ್ದೆಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚನೆ ಸಂಖ್ಯೆ: ಆರ್(2)131/2015-16/ಪಿಎಸ್‌ಸಿ, ದಿನಾಂಕ: 04-02-2016 ರಲ್ಲಿ 141 ಮೋಟಾರು ವಾಹನ ನಿರೀಕ್ಷಕರ ಅಂತಿಮ ಆಯ್ಕೆ ಪಟ್ಟಿಯನ್ನು ಕಳುಹಿಸಿದ್ದು, ಅದನ್ನು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ<br><br>ದ್ವಿತೀಯ ದರ್ಜೆ ಸಹಾಯಕರ ವೃಂದದ 30 ನೇರ ನೇಮಕಾತಿಯ ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದ ಅಂತಿಮ ಆಯ್ಕೆ ಪಟ್ಟಿಯನ್ನು ಸ್ವೀಕರಿಸಿದ್ದು, ಸದರಿ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆಯು ಪ್ರಗತಿಯಲ್ಲಿರುತ್ತದೆ.<br><br>ಅಲ್ಲದೆ, ದ್ವಿತೀಯ ದರ್ಜೆ ಸಹಾಯಕರ 4 ನೇರ |

| | | |
|---|---|---|
| ಇ. | ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ನೂತನ ಬಸ್‌ಗಳನ್ನು ರಾಜ್ಯದ ಹಳ್ಳಿಗಳಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ ಎಷ್ಟು ನೂತನ ಬಸ್‌ಗಳನ್ನು ನೀಡಲಾಗಿದೆ; (ಮಾಹಿತಿ ನೀಡುವುದು) | **ಕ.ಕ.ರ.ಸಾ.ನಿಗಮ:**<br>2023-24ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಗೆ (ವಿಭಾಗ) 34 ನೂತನ ಬಸ್ಸುಗಳನ್ನು ನೀಡಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ:<br><br>**ವಿಜಯಪುರ ವಿಭಾಗ**<br>1 ವಿಜಯಪುರ ಘಟಕ-1 — 06<br>2 ವಿಜಯಪುರ ಘಟಕ-2 — 06<br>3 ವಿಜಯಪುರ ಘಟಕ-3 — 02<br>4 ಸಿಂದಗಿ ಘಟಕ — 04<br>5 ಇಂಡಿ ಘಟಕ — 04<br>6 ಮುದ್ದೇಬಿಹಾಳ ಘಟಕ — 04<br>7 ಬಸವನ ಬಾಗೇವಾಡಿ ಘಟಕ — 04<br>8 ತಾಳಿಕೋಟೆ ಘಟಕ — 04<br>**ಒಟ್ಟು — 34**<br><br>**ವಾ.ಕ.ರ.ಸಾ.ನಿಗಮ:**<br>ಸಂಸ್ಥೆಯಲ್ಲಿ ಪ್ರಸ್ತುತ 285 ವಾಹನಗಳ ಖರೀದಿಗಾಗಿ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದ್ದು, ಅಂತಿಮಗೊಂಡ ನಂತರ ಹೊಸ ವಾಹನಗಳನ್ನು ಖರೀದಿಸಿ ಯೋಜನೆಗೆ ಅನುಗುಣವಾಗಿ ಬಾಗಲಕೋಟ ವಿಭಾಗಕ್ಕೆ ಹಂಚಿಕೆ ಮಾಡಲು ಕ್ರಮಕೈಗೊಳ್ಳಲಾಗುವದು. |
| ಈ. | ಸಾರಿಗೆ ಇಲಾಖೆಯಲ್ಲಿ ನೌಕರರ ಕೊರತೆ ಇರುವುದು ನಿಜವೇ; ಹಾಗಿದ್ದಲ್ಲಿ ನೌಕರರನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಿಕೊಳ್ಳಲಾಗುವುದು? | ಹೌದು.<br>**ಸಾರಿಗೆ ಮತ್ತು ರಸ್ತೆ ಸುರಕ್ಷತೆ:**<br>ಸಾರಿಗೆ ಇಲಾಖೆಯಲ್ಲಿ ನೌಕರರ ಕೊರತೆ ಇರುತ್ತದೆ.<br>ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ. ಡಾಟಾ ಎಂಟ್ರಿ ಆಪರೇಟರ್, ತಾಂತ್ರಿಕ ಸಲಹೆಗಾರರು, ಕ್ಲರ್ಕ್ ಕಂ ಟೈಪಿಸ್ಟ್ ಮತ್ತು ವಾಹನ ಚಾಲಕರುಗಳ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆದು, ಸಾರ್ವಜನಿಕರ ಕೆಲಸ ಕಾರ್ಯಗಳಲ್ಲಿ ವಿಳಂಬವಾಗದಂತೆ ಹಾಗೂ ಸರ್ಕಾರದ ಬೊಕ್ಕಸಕ್ಕೆ ರಾಜಸ್ವ ನಷ್ಟವಾಗದಂತೆ ಕ್ರಮ ವಹಿಸಲಾಗುತ್ತಿದೆ.<br>ನೇರನೇಮಕಾತಿಯಡಿ ಖಾಲಿ ಇರುವ 8 ಪ್ರಾದೇಶಿಕ ಸಾರಿಗೆ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆ ಸ್ವೀಕೃತವಾಗಿದ್ದು, ಈ ಬಗ್ಗೆ ಪರಿಶೀಲಿಸಿ ಆರ್ಥಿಕ ಇಲಾಖೆಯು ಸಹಮತಿಸಿರುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿ ವೃಂದದಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ ಉಳಿಕೆ ಮೂಲ ವೃಂದದ 6 |

| | | |
|---|---|---|
| | | • ಪ್ರಯಾಣಿಕರ ಬೇಡಿಕೆ ಮತ್ತು ಅವಶ್ಯಕತೆಗನುಗುಣವಾಗಿ ಅನುಸೂಚಿಗಳ ಪರಿಷ್ಕರಣೆ/ವಿಸ್ತರಣೆ/ರದ್ದತಿಗೊಳಿಸಲಾಗುತ್ತಿದೆ.<br>• ಮೆಟ್ರೋ ರೈಲು ಪ್ರಯಾಣಿಕರಿಗೆ ಮೆಟ್ರೋ ರೈಲು ನಿಲ್ದಾಣದಿಂದ ವಾಸಸ್ಥಳಗಳಿಗೆ ತಲುಪಲು (first and last mile connectivity) ಮೆಟ್ರೋ ಫೀಡರ್ ಸೇವೆಗಳನ್ನು ಒದಗಿಸಲಾಗುತ್ತಿದೆ.<br>• ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ಆಕರ್ಷಿಸಲು ಮಾಸಿಕ, ದಿನದ ಹಾಗೂ ವಾರದ ಪಾಸುಗಳನ್ನು ವಿತರಿಸಲಾಗುತ್ತಿದೆ.<br>• ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲ/ಅವಶ್ಯಕತೆಗೆ ತಕ್ಕಂತೆ ಮಾಸಿಕ ಪಾಸುಗಳನ್ನು ಪಡೆಯಲು ಅನುವಾಗುವಂತೆ ದಿನಾಂಕವಾರು ಮಾಸಿಕ ಪಾಸುಗಳನ್ನು ವಿತರಣೆ ಮಾಡಲು ಕ್ರಮ ಕೈಗೊಂಡಿರುತ್ತದೆ.<br><br>**ವಾ.ಕ.ರ.ಸಾ.ಸಂಸ್ಥೆ:**<br>285 ಬಿ.ಎಸ್.-6 ಡೀಸಲ್ ಬಸ್‌ಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>**ಕ.ಕ.ರ.ಸಾ.ನಿಗಮ:**<br>802 ಬಸ್‌ಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>ನಾಲ್ಕು ಸಾರಿಗೆ ಸಂಸ್ಥೆಗಳ ಆಯ್ದ ಸಾರಿಗೆಗಳಲ್ಲಿ ದಿನಾಂಕ 11-06-2023ರಿಂದ ಜಾರಿಗೆ ಬರುವಂತೆ ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರಿಗೆ (ವಿದ್ಯಾರ್ಥಿನಿಯರನ್ನು ಒಳಗೊಂಡಂತೆ) ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. |
| ಆ. | 15 ವರ್ಷಗಳಿಗಿಂತ ಹಳೆಯ ವಾಹನಗಳು ರಾಜ್ಯದ ಹಳ್ಳಿಗಳ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಈ ಕುರಿತು ಸರ್ಕಾರದ ನಿಲುವೇನು; | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕ.ರಾ.ರ.ಸಾ.ನಿಗಮ, ಬೆಂ.ಮ.ಸಾ.ಸಂಸ್ಥೆ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳಲ್ಲಿ ಕೇಂದ್ರ ಸರ್ಕಾರದ ಆದೇಶದನ್ವಯ 15 ವರ್ಷಗಳಿಗಿಂತ ಹಳೆಯ ವಾಹನಗಳ ನೋಂದಣಿ ಪ್ರಮಾಣ ಪತ್ರ ರದ್ದತಿಗೊಂಡಿರುವ ಹಿನ್ನೆಲೆಯಲ್ಲಿ, ಸದರಿ ವಾಹನಗಳ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದ್ದು, ಈ ರೀತಿಯ ವಾಹನಗಳನ್ನು ಕಾರ್ಯಾಚರಣೆಯನ್ನು ಮಾಡುತ್ತಿರುವುದಿಲ್ಲ. |